**ಕರ್ನಾಟಕ ವಿಧಾನ ಪರಿಷತ್ತು**
**ನೂರ ಐವತ್ತೇಳನೆಯ ಅಧಿವೇಶನ**

# ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ಎರಡನೇ ತಿದ್ದುಪಡಿ) ವಿಧೇಯಕ, 2025

**(2025ರ ವಿಧಾನಸಭೆಯ ವಿಧೇಯಕ ಸಂಖ್ಯೆ–73)**

**(ಕರ್ನಾಟಕ ವಿಧಾನಸಭೆಯಿಂದ ಅಂಗೀಕಾರವಾದ ರೂಪದಲ್ಲಿ)**

ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ಕ್ಕೆ ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನುಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 (2001ರ ಕರ್ನಾಟಕ ಅಧಿನಿಯಮ 29)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ:

ಇದು ಭಾರತ ಗಣರಾಜ್ಯದ ಎಪ್ಪತ್ತಾರನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ:-

**1. ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ.-** (1) ಈ ಅಧಿನಿಯಮವನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ಎರಡನೇ ತಿದ್ದುಪಡಿ) ಅಧಿನಿಯಮ, 2025 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು.

**2. ಪದಾವಳಿಯ ಪ್ರತಿಯೋಜನೆ.-** ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 (2001ರ ಕರ್ನಾಟಕ ಅಧಿನಿಯಮ 29)ರಲ್ಲಿ "ರಾಣಿಚೆನ್ನಮ್ಮ ವಿಶ್ವವಿದ್ಯಾನಿಲಯ" ಎಂಬ ಪದಗಳು ಬರುವ ಕಡೆಗಳಲ್ಲೆಲ್ಲಾ "ಕಿತ್ತೂರು ರಾಣಿಚೆನ್ನಮ್ಮ ವಿಶ್ವವಿದ್ಯಾನಿಲಯ" ಎಂಬ ಪದಗಳನ್ನು ಪ್ರತಿಯೋಜಿಸತಕ್ಕದ್ದು.

## ಉದ್ದೇಶಗಳು ಮತ್ತು ಕಾರಣಗಳ ಹೇಳಿಕೆ

**(ವಿಧೇಯಕವನ್ನು ಮಂಡಿಸುವಾಗ ಲಗತ್ತಿಸಿದಂತೆ)**

"ರಾಣಿಚೆನ್ನಮ್ಮ ವಿಶ್ವವಿದ್ಯಾನಿಲಯ"ದ ಹೆಸರನ್ನು "ಕಿತ್ತೂರು ರಾಣಿಚೆನ್ನಮ್ಮ ವಿಶ್ವವಿದ್ಯಾನಿಲಯ" ಎಂದು ಬದಲಾಯಿಸಲು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000 (2001ರ ಕರ್ನಾಟಕ ಅಧಿನಿಯಮ 29)ನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಅವಶ್ಯಕವೆಂದು ಪರಿಗಣಿಸಿದೆ.

ಆದ್ದರಿಂದ ಈ ವಿಧೇಯಕ.

# ಆರ್ಥಿಕ ಜ್ಞಾಪನ ಪತ್ರ

ಪ್ರಸ್ತಾವಿತ ಶಾಸನಾತ್ಮಕ ಕ್ರಮವು ಯಾವುದೇ ಹೆಚ್ಚಿನ ವೆಚ್ಚವನ್ನು ಒಳಗೊಂಡಿರುವುದಿಲ್ಲ.

**ಡಾ. ಎಂ.ಸಿ. ಸುಧಾಕರ್**
ಉನ್ನತ ಶಿಕ್ಷಣ ಮಂತ್ರಿ

**ಕೆ.ಆರ್. ಮಹಾಲಕ್ಷ್ಮಿ**
ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

## ಅನುಬಂಧ

## ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ ಅಧಿನಿಯಮ, 2000ರ

## (2001ರ ಕರ್ನಾಟಕ ಅಧಿನಿಯಮ ಸಂಖ್ಯೆ 29) ಉದ್ಧೃತ ಭಾಗ

**XXX XXX XXX**

**3. ವಿಶ್ವವಿದ್ಯಾನಿಲಯಗಳ ಸ್ಥಾಪನೆ ಮತ್ತು ನಿಗಮನ.-XXX XXX XXX**

(1ಇ) ಬೆಳಗಾವಿಯಲ್ಲಿ ಕೇಂದ್ರ ಕಾರ್ಯಸ್ಥಾನವನ್ನು ಹೊಂದಿರುವ ಮತ್ತು ಬೆಳಗಾವಿ, ಬಾಗಲಕೋಟೆ ಹಾಗೂ ವಿಜಾಪುರ ಜಿಲ್ಲೆಗಳ ಪ್ರದೇಶದ ಮೇಲೆ ಪ್ರಾದೇಶಿಕ ಅಧಿಕಾರ ಕ್ಷೇತ್ರ ವ್ಯಾಪ್ತಿಯನ್ನು ಹೊಂದಿರುವ **ರಾಣಿಚನ್ನಮ್ಮ ವಿಶ್ವವಿದ್ಯಾನಿಲಯ**ವನ್ನು ಸ್ಥಾಪಿಸತಕ್ಕದ್ದು.

**XXX XXX XXX**

**5. ಅಧಿಕಾರ ವ್ಯಾಪ್ತಿ, ವಿಶೇಷಾಧಿಕಾರ ಇತ್ಯಾದಿಗಳಿಗೆ ಪ್ರವೇಶಾವಕಾಶ.-**

**XXX XXX XXX**

(5) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯಗಳ (ತಿದ್ದುಪಡಿ) ಅಧಿನಿಯಮ, 2010ರ ಪ್ರಾರಂಭದ ದಿನಾಂಕಕ್ಕೆ ಮೊದಲು, ಬಳ್ಳಾರಿ ಮತ್ತು ಕೊಪ್ಪಳ ಜಿಲ್ಲೆಗಳಲ್ಲಿರುವ ಅಥವಾ ಬೆಳಗಾವಿ, ಬಾಗಲಕೋಟೆ ಮತ್ತು ವಿಜಾಪುರ ಜಿಲ್ಲೆಗಳಲ್ಲಿರುವ ಯಾವುವೇ ಕಾಲೇಜುಗಳು ಅಥವಾ ಶೈಕ್ಷಣಿಕ ಸಂಸ್ಥೆಗಳು, ಅನುಕ್ರಮವಾಗಿ ಗುಲಬರ್ಗಾ ವಿಶ್ವವಿದ್ಯಾನಿಲಯದಿಂದ ಅಥವಾ ಕರ್ನಾಟಕ ವಿಶ್ವವಿದ್ಯಾನಿಲಯದಿಂದ ಅನುಭವಿಸುತ್ತಿರುವ ಯಾವುದೇ ವಿಶೇಷಾಧಿಕಾರವನ್ನು ಈ ಸಂಬಂಧದಲ್ಲಿ ರಾಜ್ಯ ಸರ್ಕಾರವು ನಿರ್ದಿಷ್ಟಪಡಿಸಬಹುದಾದಂಥ ದಿನಾಂಕದಿಂದ ಜಾರಿಗೆ ಬರುವಂತೆ ಹಿಂತೆಗೆದುಕೊಳ್ಳಲಾಗಿದೆ ಎಂದು ಭಾವಿಸತಕ್ಕದ್ದು ಮತ್ತು ಗುಲಬರ್ಗಾ ಅಥವಾ ಕರ್ನಾಟಕ ವಿಶ್ವವಿದ್ಯಾನಿಲಯದ ವಿಶೇಷಾಧಿಕಾರಗಳಿಗೆ ಈ ಹಿಂದೆ ಪ್ರವೇಶ ಪಡೆದುಕೊಂಡಿದ್ದ ಅಥವಾ ಸಂಯೋಜಿತವಾಗಿದ್ದ, ಎಲ್ಲ ಅಂಥ ಕಾಲೇಜುಗಳು ಅಥವಾ ಶೈಕ್ಷಣಿಕ ಸಂಸ್ಥೆಗಳು, ಅನುಕ್ರಮವಾಗಿ ಬಳ್ಳಾರಿಯ ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾನಿಲಯ ಅಥವಾ ಬೆಳಗಾವಿಯ **ರಾಣಿಚನ್ನಮ್ಮ ವಿಶ್ವವಿದ್ಯಾನಿಲಯ**ದ ವಿಶೇಷಾಧಿಕಾರಗಳಿಗೆ ಪ್ರವೇಶ ಪಡೆದುಕೊಂಡಿವೆ ಎಂದು ಅಥವಾ ಅದಕ್ಕೆ ಸಂಯೋಜಿತವಾಗಿವೆ ಎಂದು ಭಾವಿಸತಕ್ಕದ್ದು.

**XXX XXX XXX**

**14. ಕುಲಪತಿ.- XXX XXX XXX**

(4) ಶೋಧನಾ ಸಮಿತಿಯು, ಖ್ಯಾತ ಶಿಕ್ಷಣ ತಜ್ಞರಾದ ಮೂರು ವ್ಯಕ್ತಿಗಳ ಒಂದು ಪಟ್ಟಿಯನ್ನು ಅಕಾರಾದಿ ಕ್ರಮದಲ್ಲಿ ರಾಜ್ಯಸರ್ಕಾರಕ್ಕೆ ಸಲ್ಲಿಸತಕ್ಕದ್ದು ಮತ್ತು ರಾಜ್ಯ ಸರ್ಕಾರವು ಆ ಪಟ್ಟಿಯನ್ನು ಕುಲಾಧಿಪತಿಯವರಿಗೆ ಕಳುಹಿಸತಕ್ಕದ್ದು, ಅವರು ಅರ್ಹತೆ, ಸಮದರ್ಶಿತ್ವ ಮತ್ತು ಸಾಮಾಜಿಕ ನ್ಯಾಯ ಇವುಗಳನ್ನು ಗಮನದಲ್ಲಿಟ್ಟುಕೊಂಡು ಮತ್ತು ರಾಜ್ಯ ಸರ್ಕಾರದ ಸಹಮತಿಯೊಡನೆ ಪಟ್ಟಿಯಿಂದ ಒಬ್ಬ ವ್ಯಕ್ತಿಯನ್ನು ಕುಲಪತಿಯಾಗಿ ನೇಮಕ ಮಾಡತಕ್ಕದ್ದು:

**XXX XXX XXX**

ಮತ್ತೂ ಪರಂತು, ಈ ಪ್ರಕರಣದಲ್ಲಿ ವಿರುದ್ಧವಾದುದು ಏನೇ ಇದ್ದರೂ, ರಾಜ್ಯ ಸರ್ಕಾರವು, ತಾನು ನಿರ್ದಿಷ್ಟಪಡಿಸಬಹುದಾದಂಥ ನಿಬಂಧನೆಗಳು ಮತ್ತು ಷರತ್ತುಗಳಿಗೊಳಪಟ್ಟು ವಿಜಯನಗರ ಶ್ರೀ ಕೃಷ್ಣದೇವರಾಯ ವಿಶ್ವವಿದ್ಯಾನಿಲಯ ಮತ್ತು **ರಾಣಿಚನ್ನಮ್ಮ ವಿಶ್ವವಿದ್ಯಾನಿಲಯ**ದ ಪ್ರಥಮ ಕುಲಪತಿಯವರನ್ನು ನೇಮಕಮಾಡತಕ್ಕದ್ದು.

**XXX XXX XXX**

ಸರ್ಕಾರಿ ಮುದ್ರಣಾಲಯ, ಸುವರ್ಣ ಸೌಧ, ಬೆಳಗಾವಿ, ಕಾಸೂ 43, ಪ್ರತಿಗಳು 250, 12ನೇ ಡಿಸೆಂಬರ್ 2025